ನಾಗಮಂಗಲ ತಾಲ್ಲೂಕ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ನಾಮನಿರ್ದೇಶಕರ ನೇಮಕದ ಬಗ್ಗೆ ಸರ್ಕಾರದ ಕ್ರಮ

126(361) ಶ್ರೀ ಚಲುವರಾಯ ಸ್ವಾಮಿ ಎನ್.(ನಾಗಮಂಗಲ) ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಾಗಮಂಗಲ ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಚುನಾವಣೆ ನಡೆಸಲು ಸರ್ಕಾರ ಆದೇಶಿಸಿದ್ದು, ಚುನಾವಣೆ ಪ್ರಕ್ರಿಯೆ ಕೂಡ ನಡೆದಿದ್ದು ಈ ಹಂತದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆಯನ್ನು ವಿಭಜನೆ ಮಾಡಿ ನಾಮ ನಿರ್ದೇಶಕರನ್ನು ನೇಮಕ ಮಾಡಿರುವುದರ ಔಚಿತ್ಯವೇನು;

ಆ) ನಾಗಮಂಗಲ ತಾಲ್ಲೂಕಿನಲ್ಲಿ ಎ.ಪಿ.ಎಂ.ಸಿ. ಮಾರುಕಟ್ಟೆ ಪ್ರಾಂಗಣಕ್ಕೆ ಜಾಗ (ನಿವೇಶನ) ಖರೀದಿಸಲಾಗಿದೆಯೇ?

ಶ್ರೀ ಬಿ.ಎಸ್. ಪಾಟೀಲ್ (ಸಾಸನೂರು) (ಕೃಷಿ ಮಾರುಕಟ್ಟೆ ಸಚಿವರು):

ಅ) ಪಾಂಡವಪುರ ತಾಲ್ಲೂಕಿಗೆ ಸ್ವತಂತ್ರ ಸಮಿತಿಯನ್ನು ಸ್ಥಾಪಿಸಬೇಕೆಂದು ಸ್ಥಳೀಯ ಸಾರ್ವಜನಿಕರು ಹಾಗೂ ರೈತರಿಂದ ಬಂದ ಮನವಿಗಳನ್ನು ಪರಿಶೀಲಿಸಿ, ನಾಗಮಂಗಲ ಮಾರುಕಟ್ಟೆ ಸಮಿತಿಯನ್ನು ವಿಭಜಿಸಿ ಪಾಂಡವಪುರ ತಾಲ್ಲೂಕಿಗೆ ಪ್ರತೇಕ ಸಮಿತಿಯನ್ನು ಸ್ಥಾಪಿಸಲಾಗಿದೆ. ಮಾರುಕಟ್ಟೆ ಕಾಯ್ದೆ ಪ್ರಕರಣ 10ರಲ್ಲಿನ ಅವಕಾಶದ ಮೇರೆಗೆ ನಾಗಮಂಗಲ ಹಾಗೂ ಪಾಂಡವಪುರ ಸಮಿತಿಗಳಿಗೆ ಸದಸ್ಯರನ್ನು ನಾಮನಿರ್ದೇಶನ ಮಾಡಲಾಗಿದೆ.

ಆ) ಇಲ್ಲ.

ತುಂಗಾ ಮೇಲ್ದಂಡೆ ಯೋಜನೆಗೆ ಭೂಸ್ವಾಧೀನ ಪಡಿಸಿಕೊಂಡ ಭೂ ಮಾಲೀಕರಿಗೆ ಪರಿಹಾರ

127(364) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಂಗಾ ಮೇಲ್ದಂಡೆ ಯೋಜನೆ ಸಲುವಾಗಿ ಭೂಸ್ವಾಧೀನಪಡಿಸಿಕೊಂಡ ಭೂಮಾಲೀಕರುಗಳಿಗೆ ಪರಿಹಾರ ಧನ ನೀಡಲಾಗಿದೆಯೇ; ಎಷ್ಟು ಫಲಾನುಭವಿಗಳಿಗೆ ಪರಿಹಾರ ಧನ ನೀಡುವುದು ಬಾಕಿ ಇರುತ್ತದೆ;

ಆ) ತುಂಗಾ ಮೇಲ್ದಂಡೆ ಯೋಜನೆ ಅಣೆಕಟ್ಟು ಕಾಮಗಾರಿ ಯಾವ ಹಂತದಲ್ಲಿದೆ; ಈ ಕಾಮಗಾರಿಯ ಅಂದಾಜು ಮೊತ್ತ ಎಷ್ಟು; ಇದುವರೆಗೂ ಖರ್ಚಾದ ಮೊತ್ತ ಎಷ್ಟು; ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು; ವಿವರ ಒದಗಿಸುವುದು;

ಇ) ತುಂಗಾ ಮೇಲ್ದಂಡೆ ಯೋಜನೆ ಸಲುವಾಗಿ ಅಗತ್ಯ ಇರುವ 400 ಹೆಕ್ಟೇರ್ ಸಂರಕ್ಷಿತ ಅರಣ್ಯವನ್ನು ಕೇಂದ್ರ ಪರಿಸರ ಇಲಾಖೆಯಿಂದ ಬಿಡುಗಡೆಗೊಳಿಸಲು ಅನುಮತಿ ದೊರೆತಿದೆಯೇ; ಶಿವಮೊಗ್ಗದಿಂದ ಹೊನ್ನಾಳಿವರೆಗಿನ ಈ ಕಾಮಗಾರಿ ಸ್ಥಗಿತಗೊಂಡಿರುವ ಕಾರಣವೇನು; ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು; ವಿವರ ಒದಗಿಸುವುದು;